**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 08 ಎಸ್‌ಆರ್‌ಎಸ್ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 23/06/2022

# ಅಧಿಕೃತ ಜ್ಞಾಪನ

ವಿಷಯ: ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಹಾಗೂ ಅಂಗ ಸಂಸ್ಥೆಗಳಲ್ಲಿ ಗುತ್ತಿಗೆ (Contract) ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಮಾತೃತ್ವ (ಹೆರಿಗೆ) ರಜೆ ಸೌಲಭ್ಯವನ್ನು ವಿಸ್ತರಿಸುವ ಕುರಿತು.

******

ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಹಾಗೂ ಅಂಗ ಸಂಸ್ಥೆಗಳಾದ ನಿಗಮ/ಮಂಡಳಿ/ಸ್ವಾಯತ್ತ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮಹಿಳಾ ನೌಕರರಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಾತೃತ್ವ (ಹೆರಿಗೆ) ರಜೆಯ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರ ಸಹಮತಿಸಿದೆ:

1. ಮಾತೃತ್ವ ರಜೆಯನ್ನು ರಜೆಯ ಪ್ರಾರಂಭದ ದಿನಾಂಕದಿಂದ ಗರಿಷ್ಠ 180 ದಿನಗಳವರೆಗೆ (ಒಂದು ನೂರ ಎಂಭತ್ತು ದಿನಗಳು) ಮಂಜೂರು ಮಾಡಬಹುದು.
2. ಗರ್ಭಸ್ರಾವ ಅಥವಾ ಗರ್ಭಪಾತದಿಂದ ಗರ್ಭಧಾರಣೆಯು ಪರ್ಯಾವಸಾನಗೊಂಡ ಸಂದರ್ಭದಲ್ಲಿ ಮಾತೃತ್ವ ರಜೆಯು 6 ವಾರಗಳನ್ನು ಮೀರಬಾರದು.
3. ಇಂತಹ ರಜೆಗಾಗಿ ಸಲ್ಲಿಸಿದ ಅರ್ಜಿಯು ನೋಂದಾಯಿತ ವೃತ್ತಿನಿರತ ವೈದ್ಯರಿಂದ ಪಡೆದ ಪ್ರಮಾಣ ಪತ್ರದಿಂದ ಸಮರ್ಥಿತವಾಗಿರಬೇಕು.
4. ಮಾತೃತ್ವ ರಜೆಯ ಮೇಲೆ ತೆರಳುವ ನೌಕರರು ರಜೆಯ ನಿಕಟಪೂರ್ವದಲ್ಲಿ ಪಡೆಯುತ್ತಿದ್ದ ವೇತನಕ್ಕೆ ಸಮನಾದ ವೇತನವನ್ನು ರಜೆಯ ಅವಧಿಯಲ್ಲಿ ಪಡೆಯಲು ಅರ್ಹರಿರುತ್ತಾರೆ.
5. ಎರಡು ಅಥವಾ ಹೆಚ್ಚು ಮಕ್ಕಳನ್ನು ಹೊಂದಿರುವ ಮಹಿಳಾ ಗುತ್ತಿಗೆ ನೌಕರರಿಗೆ ಈ ಮಾತೃತ್ವ ರಜೆಯನ್ನು ಮಂಜೂರು ಮಾಡತಕ್ಕದ್ದಲ್ಲ. ಮಾತೃತ್ವ ರಜೆಗಾಗಿ ಸಲ್ಲಿಸುವ ಅರ್ಜಿಯೊಂದಿಗೆ ಸಂಬಂಧಿತ ಗುತ್ತಿಗೆ ಮಹಿಳಾ ನೌಕರರು ಈ ಕುರಿತು ಸ್ವಯಂ-ಘೋಷಣೆಯನ್ನು ಮಾತೃತ್ವ ರಜೆಯನ್ನು ಮಂಜೂರು ಮಾಡುವ ಅಧಿಕಾರಿಗೆ ಸಲ್ಲಿಸತಕ್ಕದ್ದು.
6. ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಮಹಿಳಾ ನೌಕರರಿಗೆ ಗರಿಷ್ಠ 180 ದಿನಗಳವರೆಗೆ ಮಾತೃತ್ವ ರಜೆಯನ್ನು ಈ ಕೆಳಕಂಡಂತೆ ನಿಯತಗೊಳಿಸತಕ್ಕದ್ದು.
    1. ಶ್ರೀಮತಿ X ಇವರ ಒಪ್ಪಂದದ ಅವಧಿ ದಿನಾಂಕ: 15/07/2021 ರಿಂದ ಪ್ರಾರಂಭವಾಗಿ ದಿನಾಂಕ: 14/07/2022ಕ್ಕೆ ಮುಕ್ತಾಯವಾಗುತ್ತದೆ. ಅವರು ದಿನಾಂಕ: 01/05/2022 ರಂದು ಮಾತೃತ್ವ ರಜೆಯ ಮೇಲೆ ತೆರಳಿದ್ದಲ್ಲಿ ಹಾಗೂ ಅವರ ಗುತ್ತಿಗೆ ಅವಧಿಯು ವಿಸ್ತರಿಸಲ್ಪಡದಿದ್ದಲ್ಲಿ ಅವರ ಮಾತೃತ್ವ ರಜೆಯ ಅವಧಿಯನ್ನು ಒಪ್ಪಂದದ ಗರಿಷ್ಠ ಅವಧಿಯವರೆಗೆ ಅಂದರೆ ದಿನಾಂಕ: 14/07/2022 ರವರೆಗೆ ಸೀಮಿತಗೊಳಿಸತಕ್ಕದ್ದು.
    2. ಒಂದು ವೇಳೆ ಅವರ ಗುತ್ತಿಗೆ ಅವಧಿಯು ವಿಸ್ತರಿಸಲ್ಪಟ್ಟಲ್ಲಿ ಆಗ ಅವರು ಗರಿಷ್ಠ 180 ದಿನಗಳ ಮಾತೃತ್ವ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ.

2…

7. ಈ ಸೌಲಭ್ಯವನ್ನು ದಿನಾಂಕ: 01/04/2022 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿದೆ.

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿ ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
10. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
22. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
23. ವಾರಪತ್ರ/ಶಾಖೆಯ ರಕ್ಷಾ ಕಡತ.

ಕ್ರಮ ಸಂಖ್ಯೆ: 1 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ।

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.